**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಎಸ್.ವ್ಹಿ. ಸಂಕನೂರ, ಶ್ರೀ ಎಸ್.ಎಸ್. ಭೋಜೇಗೌಡ, ಶ್ರೀ ಶಶೀಲ್ ಜಿ ನಮೋಶಿ ಹಾಗೂ ಶ್ರೀ ನಿರಾಣಿ ಹಣಮಂತ್ ರುದ್ರಪ್ಪ ಇವರುಗಳು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಉತ್ತರ**

**ವಿಷಯ:**

NCERT ನಿಯಮದಂತೆ ಪ್ರಾಥಮಿಕ ಶಾಲಾ ಶಿಕ್ಷಕರು ಕಡ್ಡಾಯವಾಗಿ TET ಪರೀಕ್ಷೆಯನ್ನು ಪಾಸಾಗಬೇಕೆಂದು ಇತ್ತೀಚಿಗೆ ಸರ್ವೋಚ್ಚ ನ್ಯಾಯಾಲಯ ತೀರ್ಪು ಕೊಟ್ಟ ಹಿನ್ನೆಲೆಯಲ್ಲಿ ನಿವೃತ್ತಿ ಅಂಚಿನಲ್ಲಿರುವ ಶಿಕ್ಷಕರು ಮಾನಸಿಕ ಆಘಾತಕ್ಕೆ ಒಳಗಾಗಿರುವ ಬಗ್ಗೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಗಮನ ಸೆಳೆಯುವುದು.

**ಉತ್ತರ:**

ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲ್ ಸಂಖ್ಯೆ: 1385/2025, ದಿನಾಂಕ: 01.09.2025 ರಂದು ನೀಡಿರುವ ತೀರ್ಪಿನಲ್ಲಿ ಎಲ್ಲಾ ಶಿಕ್ಷಕರುಗಳಿಗೆ ಅವರುಗಳು ನೇಮಕಗೊಂಡ ವರ್ಷವನ್ನು ಪರಿಗಣಿಸದೆ ಶಿಕ್ಷಕರ ಅರ್ಹತಾ ಪರೀಕ್ಷೆ (TET) ಯಲ್ಲಿ ಉತ್ತೀರ್ಣರಾಗುವುದನ್ನು ಕಡ್ಡಾಯಗೊಳಿಸಿ ಆದೇಶಿಸಲಾಗಿದೆ.

ಆದರೆ, ಮಾನ್ಯ ಸರ್ವೋಚ್ಚ ನ್ಯಾಯಾಲಯದ ತೀರ್ಪಿನ ಮೇರೆಗೆ ಟಿಇಟಿ ನಿಯಮದಂತೆ ಸೇವಾ ನಿರತ ಶಿಕ್ಷಕರೆಲ್ಲರೂ ಶಿಕ್ಷಕರ ಅರ್ಹತಾ ಪರೀಕ್ಷೆ (TET) ಯನ್ನು ಬರೆಯಬೇಕಾಗಿದ್ದು, ಶಿಕ್ಷಕರ ಅರ್ಹತಾ ಪರೀಕ್ಷೆ (TET) ಬರೆಯದೇ / ಬರೆದು ಉತ್ತೀರ್ಣರಾಗದೇ ಇರುವ ಶಿಕ್ಷಕರು ಸ್ವಯಂ ನಿವೃತ್ತಿ ಅಥವಾ ಕಡ್ಡಾಯ ನಿವೃತ್ತಿ (ಎಲ್ಲಾ ಸೌಲಭ್ಯಗಳ ಸಹಿತ) ಹೊಂದಬಹುದಾಗಿರುತ್ತದೆ. 05 ವರ್ಷಕ್ಕಿಂತ ಕಡಿಮೆ ಸೇವಾವಧಿ ಹೊಂದಿರುವ ಶಿಕ್ಷಕರು ಶಿಕ್ಷಕರ ಅರ್ಹತಾ ಪರೀಕ್ಷೆ (TET) ಯಲ್ಲಿ ಉತ್ತೀರ್ಣರಾಗದೇ ಇದ್ದರೂ ಸೇವೆಯಲ್ಲಿ ಮುಂದುವರೆಯಬಹುದಾಗಿದ್ದರೂ, ಯಾವುದೇ ಬಡ್ತಿಯನ್ನು ಪಡೆಯಲು ಅರ್ಹರಿರುವುದಿಲ್ಲ.

ದಿನಾಂಕ: 04.09.2025 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲ್ ಸಂಖ್ಯೆ: 1385/2025 ರಲ್ಲಿ ದಿನಾಂಕ: 01.09.2025 ರಂದು ನೀಡಿರುವ ಆದೇಶವು ಈಗಾಗಲೇ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಶಿಕ್ಷಕರಿಗೆ ಅನ್ವಯವಾಗುವುದೇ ಎಂಬ ಅಂಶದ ಬಗ್ಗೆ ಕಾನೂನು ಇಲಾಖೆಯ ಅಭಿಪ್ರಾಯ ಪಡೆಯುವಂತೆ ನಿರ್ದೇಶನ ನೀಡಿತ್ತು. ಅದರಂತೆ, ಕಾನೂನು ಇಲಾಖೆಯ ಅಭಿಪ್ರಾಯವನ್ನು ದಿನಾಂಕ: 29.10.2025 ರಂದು ಪಡೆಯಲಾಗಿದ್ದು, ಪ್ರಾಥಮಿಕ ಶಾಲಾ ಶಿಕ್ಷಕರಾಗಿ ನೇಮಕಗೊಳ್ಳಲು ಮತ್ತು ಸೇವೆಯಲ್ಲಿರುವ ಶಿಕ್ಷಕರು ಬಡ್ತಿ ಪಡೆಯಲು ಶಿಕ್ಷಕರ ಅರ್ಹತಾ ಪರೀಕ್ಷೆ (ಟಿಇಟಿ) ಕಡ್ಡಾಯ ಪಡಿಸಿ ಮಾನ್ಯ ಸರ್ವೋಚ್ಚ ನ್ಯಾಯಾಲಯವು ಸಿವಿಲ್ ಅಪೀಲ್ ಸಂಖ್ಯೆ: 1385/2025 ದಿನಾಂಕ: 01.09.2025 ರಂದು ನೀಡಿರುವ ತೀರ್ಪಿನ ಕುರಿತು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ **"ಪುನರ್ ಪರಿಶೀಲನಾ ಅರ್ಜಿ"** ಸಲ್ಲಿಸುವಂತೆ ಅಭಿಪ್ರಾಯ ನೀಡಿರುತ್ತದೆ. ಇಲಾಖೆಯಿಂದ **"ಪುನರ್ ಪರಿಶೀಲನಾ ಅರ್ಜಿ"** ಸಲ್ಲಿಸಲು ಕ್ರಮವಹಿಸಲಾಗುತ್ತಿದೆ.

ಸಂಖ್ಯೆ: ಇಪಿ 217 ಡಿಎಆರ್ 2025

**(ಎಸ್. ಮಧುಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.